ಕರ್ನಾಟಕ ಸರ್ಕಾರ

(ಕಂದಾಯ ಇಲಾಖೆ)

ಉಪತಹಶೀಲ್ದಾರವರ ನ್ಯಾಯಾಲಯ ನಾಡಕಛೇರಿ ಕೊಟ್ಟೂರು

ಸಂ/ಕಂ/ಹ.ಬ./ನಾಕಕೊ/44/2016-17. ದಿನಾಂಕ:16-08-2016.

| ವಾದಿಗಳು | ಪ್ರತಿವಾದಿಗಳು |
|---|---|
| ನಿಂಗಪ್ಪ ತಂದೆ ಲೇಟ್ ನಿಂಗಪ್ಪ<br>ಕಂದಗಲ್ಲು ಗ್ರಾಮ<br>ಕೂಡ್ಲಿಗಿ ತಾಲೂಕು | ಕಂದಾಯ ಪರಿವೀಕ್ಷಕರು<br>ಕೊಟ್ಟೂರು |
| ಕೂಡ್ಲಿಗಿ ತಾಲೂಕು ಗಜಾಪುರ ಗ್ರಾಮದ ಸನಂ 343ಬಿ/1. ವಿಸ್ತೀರ್ಣ 0-68. ಸೆಂಟ್ಸ್ ಜಮೀನನ್ನು ಪೋತಿವಾರಸು ಪ್ರಕಾರ ಹಕ್ಕು ಬದಲಾವಣೆ ಮಾಡುವ ಬಗ್ಗೆ. | |

ಪ್ರಸ್ತಾವನೆ:

ಕೂಡ್ಲಿಗಿ ತಾಲೂಕು ಗಜಾಪುರ ಗ್ರಾಮದ ಸನಂ 343ಬಿ/1. ವಿಸ್ತೀರ್ಣ 0-68. ಸೆಂಟ್ಸ್ ಜಮೀನನ್ನು ಸದರಿ ತಾಲೂಕು ಕಂದಗಲ್ಲು ಗ್ರಾಮದ ನಿಂಗಪ್ಪ ತಂದೆ ಲೇಟ್ ನಿಂಗಪ್ಪ ಇವರು ಪೋತಿವಾರಸು ಪ್ರಕಾರ ಹಕ್ಕು ಬದಲಾವಣೆ ಮಾಡಲು ಕೋರಿ ಅರ್ಜಿ ಸಲ್ಲಿಸಿರುತ್ತಾರೆ. ಈ ಬಗ್ಗೆ ಗ್ರಾಮಲೆಕ್ಕಿಗರು ಗಜಾಪುರ ಇವರು ನಮೂನೆ-21 ನೋಟಿಸನ್ನು ದಿನಾಂಕ 23-02-2016. ರಂದು ಗ್ರಾಮದಲ್ಲಿ ಪ್ರಚೂರು ಪಡಿಸಿ ಹಾಗೂ ಸಂಬಂಧಪಟ್ಟವರಿಗೆ ಜಾರಿ ಮಾಡಲಾಗಿ ಮೂಲ ಪಟ್ಟದಾರರಿಗೆ ಸಂತಾನ ಇರುವುದಿಲ್ಲ ಅರ್ಜಿದಾರರನ್ನು ದತ್ತು ಪಡೆದ ಬಗ್ಗೆ ದಾಖಲೆಗಳು ಇಲ್ಲದಿರುವುದರಿಂದ ಈ ಪ್ರಕರಣವನ್ನು ಎಂ.ಆರ್.ನಂಬರ್: 29/2015-16. ದಿನಾಂಕ 24-03-2016 ರಲ್ಲಿ ಗೈರು ಮಂಜೂರು ಮಾಡಿ ಮುಂದಿನ ಕ್ರಮಕ್ಕೆ ಈ ಕಾರ್ಯಾಲಯಕ್ಕೆ ಕಳುಹಿಸಿ ಕೊಟ್ಟಿರುತ್ತಾರೆ.

ಈ ಪ್ರಕರಣವನ್ನು ಈ ಕಾರ್ಯಾಲಯದಲ್ಲಿ ವಿಚಾರಣೆ ಮಾಡುವ ದಿಸೆಯಲ್ಲಿ ಉಭಯ ಪಕ್ಷದವರಿಗೂ ನೋಟಿಸು ನೀಡಿ ದಿನಾಂಕ 26-07-2016 ರಿಂದ 16-08-2016 ರ ವರೆಗೆ ವಿಚಾರಣೆ ಮಾಡಲಾಯಿತು.

ವಿಚಾರಣೆ ಸಮಯದಲ್ಲಿ ಅರ್ಜಿದಾರರು ಹಾಜರಾಗಿರುತ್ತಾರೆ. ಅರ್ಜಿದಾರರು ಗಜಾಪುರ ಗ್ರಾಮದ ಸನಂ 343ಬಿ/1. ವಿಸ್ತೀರ್ಣ 0-68. ಸೆಂಟ್ಸ್ ಜಮೀನು ನನ್ನ ಸಾಕು ತಂದೆಯವರಾದ ನಾಣ್ಯಾಪುರದ ವೀರಭದ್ರಪ್ಪ ತಂದೆ ರುದ್ರಪ್ಪ ಇವರ ಹೆಸರಲ್ಲಿ ಲೆಕ್ಕ ದಾಖಲೆ ಪಟ್ಟಾ ಇರುತ್ತದೆ. ಇವರು ದಿನಾಂಕ 04-08-1992 ರಂದು ಮತ್ತು ನನ್ನ ಸಾಕು ತಾಯಿಯವರಾದ ಹಾಲಮ್ಮ ಗಂಡ ನಾಣ್ಯಾಪುರ ವೀರಭದ್ರಪ್ಪ ಇವರು ದಿನಾಂಕ 11-03-1997 ರಂದ ನಿಧನ ಹೊಂದಿರುತ್ತಾರೆ. ಇವರಿಗೆ ಸಂತಾನವಿಲ್ಲದ ಕಾರಣ ನನ್ನನ್ನು ದಿನಾಂಕ 05-03-1986 ರಂದು ದತ್ತು ಸ್ವೀಕೃತಿ ಪತ್ರ ಬರೆಯಿಸಿ ನನ್ನನ್ನು ದತ್ತು ಪಡೆದಿರುತ್ತಾರೆ. ಕಾರಣ ಪೋತಿವಾರಸು ಹಾಗೂ ದತ್ತು ಸ್ವೀಕೃತಿ ಪತ್ರ ಪ್ರಕಾರ ನನ್ನ ಹೆಸರಲ್ಲಿ ಖಾತಾ ಬದಲಾವಣೆ ಮಾಡಬೇಕೆಂದು ಕೋರಿರುತ್ತಾರೆ.

ಮೇಲಿನ ಎಲ್ಲಾ ಅಂಶಗಳನ್ನು ಗಣನೆಗೆ ತೆಗೆದು ಕೊಂಡು ಸದರಿ ವಿವಾದಿತ ಜಮೀನಿನ ಕಂದಾಯ ಲೆಕ್ಕಗಳನ್ನು ಪರಿಶೀಲಿಸಿ ಅರ್ಜಿದಾರರ ಹೇಳಿಕೆಗಳನ್ನು ಕೇಳಿ ಅರ್ಜಿದಾರರು ನೊಂದಾಯಿಸದ ದತ್ತು ಪತ್ರವನ್ನು ಆಧರಿಸಿ ಹಕ್ಕು ಬದಲಾವಣೆಗೆ ಅರ್ಜಿ ಸಲ್ಲಿಸಿರುವುದರಿಂದ ಅರ್ಜಿದಾರರ ಅರ್ಜಿಯನ್ನು ತಿರಸ್ಕರಿಸುತ್ತಾ ಈ ಕೆಳಗಿನಂತೆ ಆದೇಶ ಮಾಡಲಾಗಿದೆ.

ಪು.ತಿ.ನೋ:-2

## –:ಆದೇಶ:–

ಮೇಲೆ ವಿವರಿಸಿದ ಸಂದರ್ಭ ವಾಸ್ತುವಾಂಶ ಮತ್ತು ಕಾರಣಗಳಿಂದ ಕೂಡ್ಲಿಗಿ ತಾಲೂಕು ಗಜಾಪುರ ಗ್ರಾಮದ ಸನಂ 343ಬಿ/1. ವಿಸ್ತೀರ್ಣ 0–68. ಸೆಂಟ್ಸು ಜಮೀನಿನ ಅರ್ಜಿದಾರರು ನೋಂದಾಯಿಸದ ದತ್ತು ಪತ್ರವನ್ನಾಧರಿಸಿ ಹಕ್ಕು ಬದಲಾವಣೆಗೆ ಅರ್ಜಿ ಸಲ್ಲಿಸಿರುವುದರಿಂದ ಅರ್ಜಿದಾರರ ಅರ್ಜಿಯನ್ನು ತಿಸ್ಕರಿಸುತ್ತಾ ಪಹಣಿಯನ್ನು ಯಥಾಸ್ಥಿತಿಯಂತೆ ಮುಂದುವರೆಸಲು ಆದೇಶಿಸಿ ಈ ಪ್ರಕರಣವನ್ನು ಈ ಕಾರ್ಯಾಲಯದಲ್ಲಿ ಈ ಹಂತದಲ್ಲಿ ಮುಕ್ತಾಯಗೊಳಿಸಲು ಆದೇಶಿಸಲಾಗಿದೆ.

ಈ ಆದೇಶವನ್ನು ಹೇಳಿ ಬರೆಯಿಸಿ ಬೆರಳಚ್ಚು ಮಾಡಿಸಿ ತಪ್ಪುಗಳನ್ನು ತಿದ್ದಿ ದಿನಾಂಕ 16–08–2016 ರಂದು ತೆರೆದ ನ್ಯಾಯಾಲಯದಲ್ಲಿ ಘೋಷಿಸಲಾಯಿತು.

ಉಪತಹಶೀಲ್ದಾರರು
ನಾಡಕಚೇರಿ ಕೊಟ್ಟೂರು
[illegible]

ಇದರ ಪ್ರತಿಯನ್ನು:

1) ಅರ್ಜಿದಾರರಾದ ನಿಂಗಪ್ಪ ತಂದೆ ಲೇಟ್ ನಿಂಗಪ್ಪ ಕಂದಗಲ್ಲು ಗ್ರಾಮ ಕೂಡ್ಲಿಗಿ ತಾಲೂಕು ಇವರಿಗೆ ಕಳುಹಿಸಿ ಕೊಡಲಾಗಿದೆ.
2) ಕಂದಾಯ ಪರಿವೀಕ್ಷಕರು ಕೊಟ್ಟೂರು ಇವರ ಮಾಹಿತಿಗಾಗಿ ಕಳುಹಿಸಿ ಕೊಡಲಾಗಿದೆ.
3) ಗಣಕೀಕರಣ ವಿಭಾಗ ತಾಲೂಕು ಕಛೇರಿ ಕೂಡ್ಲಿಗಿ ಇವರ ಮುಂದಿನ ಕ್ರಮಕ್ಕಾಗಿ ಕಳುಹಿಸಿ ಕೊಡಲಾಗಿದೆ.
4) ಅಪೀಲು ಅವಧಿ 60 ದಿವಸ ಇರುತ್ತದೆ.